# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಹೆಚ್ಚುವರಿ ನಿರ್ದೇಶಕರು(ನಗರ ಯೋಜನೆ) ರವರ ಕಛೇರಿ,ಮಹಾನಗರ ಪಾಲಿಕೆ,ಎನ್.ಆರ್. ವೃತ್ತ,ಬೆಂಗಳೂರು-02.**

ಸಂಖ್ಯೆ: ಜೆಡಿಟಿಪಿ (ದ)/ಪ್ರಾ.ಪ/ಸನಿ/55/2014-15 ದಿನಾಂಕ: 09-03-2015.

## ಪ್ರಾರಂಭಿಕ ಪ್ರಮಾಣ ಪತ್ರ

O/o Joint Director Town Planning (South) ★

**ವಿಷಯ:** ಆಸ್ತಿ ಸಂಖ್ಯೆ 13, 5ನೇ ಮುಖ್ಯ ರಸ್ತೆ, ಕೆ.ಜಿ.ನಗರ, ವಾರ್ಡ್ ಸಂಖ್ಯೆ 142, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: JDTP (S)/ LP 53/10-11 ದಿನಾಂಕ: 03-01-2015.
2) ಅರ್ಜಿದಾರರ ಮನವಿ ದಿನಾಂಕ: 29-01-2015.
3) ಅಪರ ನಿರ್ದೇಶಕರು, ನಗರ ಯೋಜನೆ ರವರ ಆದೇಶ ದಿನಾಂಕ: 27-02-2015.

*****

ಕೆ.ಜಿ.ನಗರ, ವಾರ್ಡ್ ಸಂಖ್ಯೆ 142 ರಲ್ಲಿರುವ ಆಸ್ತಿ ಸಂಖ್ಯೆ 13, 5ನೇ ಮುಖ್ಯ ರಸ್ತೆ ಇಲ್ಲಿ ನಿರ್ಮಿಸುತ್ತಿರುವ ಟವರ್-1 ಮತ್ತು 2 ರಲ್ಲಿ 3ತಳ+ನೆಲ+ಮೇಲಿನ 18 ಅಂತಸ್ತಿನ 132 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕಾಗಿ ನಕ್ಷೆ ಸಂಖ್ಯೆ: JDTP (S)/ LP 53/10-11 ದಿನಾಂಕ: 03-01-2015 ರಂದು ಮಂಜೂರಾತಿ ನೀಡಲಾಗಿದೆ. ವಸತಿ ಸಮುಚ್ಚಯ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ಕಟ್ಟಡದ ಸ್ಥಳವನ್ನು ದಿನಾಂಕ: 20-02-2015 ರಂದು ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು ಮತ್ತು ಸಹಾಯಕ ಅಭಿಯಂತರರವರೊಂದಿಗೆ ಸ್ಥಳ ಪರಿಶೀಲಿಸಿದ್ದು, ವಲಯ ನಿಯಮಾವಳಿಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ಅಳವಡಿಸಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 1,65,000/- ಗಳನ್ನು ಅರ್ಜಿದಾರರು ರಸೀದಿ ಸಂಖ್ಯೆ: TP/JDTPSUT/01/2014-15/ Mar/0008 ದಿನಾಂಕ: 05-03-2015 ರಂದು ಭರಿಸಿದ್ದು, ಸಂದಾಯಿಸಿ ಕೊಳ್ಳಲಾಗಿದೆ. ವಸತಿ ಸಮುಚ್ಚಯ ಕಛೇರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) Inspection chambers for the drain from Chamrajpet Main Road till the end of the drain in question at an interval of 60.0 m or as may be directed by the concerned BBMP Officers at the cost of the Developer.
5) The Developer should maintain the road in future at his own cost.

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

9/3 9/3 9/3/15

ಗೆ,

M/s. Stumpp, Schuele & Somappa Pvt. Ltd.,
# 13, 5ನೇ ಮುಖ್ಯ ರಸ್ತೆ,
ಕೆ.ಜಿ.ನಗರ, ಬೆಂಗಳೂರು.

Scanned by CamScanner